RNU AIR DHARWAD

# SEPTEMBER 11, 2024

## ALL INDIA RADIO- DHARWAD
## PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ವ್ಯಾಪಾರ, ವಹಿವಾಟಿಗೆ ರಾಜ್ಯದಲ್ಲಿ ಮುಕ್ತ ವಾತಾವರಣ; ಸಮೃದ್ಧಿ, ಪಾಲುದಾರಿಕೆ ಹಾಗೂ ಪ್ರಗತಿಗಾಗಿ ಶ್ರಮಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ.**
- **ಅಗತ್ಯ ಬೆಳೆಗಳಿಗೆ ಬೆಂಬಲ ಬೆಲೆ ನೀಡಲು ಸರ್ಕಾರ ಬದ್ಧ – ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್.**
- **ತಾಂತ್ರಿಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ – ಸಚಿವ ಡಾಕ್ಟರ್ ಎಂ.ಸಿ.ಸುಧಾಕರ್.**
- **'ಬೆಳವಣಿಗೆಯ ಹೊಸ ಪರಿಕಲ್ಪನೆ' ಧ್ಯೇಯದೊಂದಿಗೆ, ಬೆಂಗಳೂರಿನಲ್ಲಿ ಫೆಬ್ರುವರಿ 12 ರಿಂದ ಜಾಗತಿಕ ಹೂಡಿಕೆದಾರರ ಸಮಾವೇಶ– ಸಚಿವ ಎಂ.ಬಿ ಪಾಟೀಲ್ ಮಾಹಿತಿ**

**ಈಗ ವಾರ್ತೆಗಳ ವಿವರ**

**ಬೆಂಗಳೂರು ಕರ್ನಾಟಕದ ರಾಜಧಾನಿಯಾಗಿಯಷ್ಟೇ** ಅಲ್ಲ, ಭಾರತದ ಸಿಲಿಕಾನ್ ವ್ಯಾಲಿ ಕೂಡ ಆಗಿದೆ. ಭಾರತದ ತಂತ್ರಜ್ಞಾನ ಕ್ರಾಂತಿಯ ಮುಂಚೂಣಿಯಲ್ಲಿದೆ. ಉದ್ಯಮಶೀಲತೆ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರವಾಗಿ ಬೆಂಗಳೂರು ಮುಂದುವರಿದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಯುಎಸ್ ಇಂಡಿಯಾ ಬಿಸ್‌ನೆಸ್ ಕೌನ್ಸಿಲ್‌ನ ಪ್ರತಿನಿಧಿಗಳೊಂದಿಗೆ ನಡೆಸಿದ ದುಂಡು ಮೇಜಿನ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕರ್ನಾಟಕ ರಾಜ್ಯ ವ್ಯಾಪಾರ ಹಾಗೂ ವಹಿವಾಟಿಗೆ ಮುಕ್ತ ವಾತಾವರಣ ಕಲ್ಪಿಸಿದೆ. ಐಟಿ–ಬಿಟಿ, ಏರೋಸ್ಪೇಸ್, ನವೋದ್ಯಮ ಹೀಗೆ ಹಲವು ಕ್ಷೇತ್ರಗಳಲ್ಲಿ ಸಮನ್ವತೆಯ ವಾತಾವರಣವನ್ನು ನಿರ್ಮಿಸಿದೆ. ಕೌಶಲ್ಯಭರಿತ ಕಾರ್ಯಪಡೆಯಿಂದ ನೈಸರ್ಗಿಕ ಸಂಪತ್ತಿನವರೆಗೂ ಕರ್ನಾಟಕ ಉದ್ಯಮಿಗಳಿಗೆ ಹಲವು ಅವಕಾಶಗಳನ್ನು ಕಲ್ಪಿಸಿಕೊಟ್ಟಿದೆ. ಸಮೃದ್ಧಿ, ಪಾಲುದಾರಿಕೆ ಮತ್ತು ಪ್ರಗತಿಗಾಗಿ ಒಟ್ಟಾಗಿ ಶ್ರಮಿಸೋಣ ಎಂದು ತಿಳಿಸಿದರು.

*******

**ಅಗತ್ಯ ಬೆಳೆಗಳಿಗೆ ಬೆಂಬಲ ಬೆಲೆ ನೀಡಲು ಸರ್ಕಾರ** ಬದ್ಧವಿದೆ. ಪಿಎಸ್‌ಎಸ್ ಯೋಜನೆಯಡಿ, ಕೇಂದ್ರ ಸರ್ಕಾರ ಹೆಸರುಕಾಳು ಖರೀದಿಗೆ ಅನುಮತಿ ನೀಡಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ಹೇಳಿದ್ದಾರೆ.ಮಧ್ಯಪ್ರದೇಶದ ಭೂಪಾಲ್‌ನಲ್ಲಿ ಮಾತನಾಡಿದ ಅವರು, ಕನಿಷ್ಠ ಬೆಂಬಲ ಬೆಲೆಯಡಿ ಮಹಾರಾಷ್ಟ್ರ, ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳ ರೈತರಿಂದ ಸೋಯಾಬಿನ್ ಖರೀದಿಗೆ ನಮ್ಮ ಬದ್ಧತೆ ಇದೆ. ಅದರಂತೆ, ಪಿ.ಎಸ್.ಎಸ್ ಯೋಜನೆಯಡಿ, ಸೋಯಾಬಿನ್ ಖರೀದಿಗೆ

ಈಗಾಗಲೇ ಅನುಮತಿ ನೀಡಲಾಗಿದೆ. ರಾಜ್ಯಗಳು ತಕ್ಷಣವೇ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸಲಾಗಿದೆ ಎಂದರು.

*******

**ವಿಶ್ವೇಶ್ವರಯ್ಯ ತಾಂತ್ರಿಕ** ವಿಶ್ವವಿದ್ಯಾಲಯವನ್ನು ಪ್ರತ್ಯೇಕ ವಿಶ್ವವಿದ್ಯಾಲಯವನ್ನಾಗಿ ರೂಪಿಸಿ, ಅಹಮದಾಬಾದ್‌ನ ಐಐಟಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ಇದಕ್ಕಾಗಿ ಜ್ಞಾನಭಾರತಿ ಆವರಣದಲ್ಲಿ 50 ಎಕರೆ ಭೂಮಿ ಒದಗಿಸಲಾಗುವುದು. ಈ ಮೂಲಕ ತಾಂತ್ರಿಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಉನ್ನತ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಎಂ.ಸಿ.ಸುಧಾಕರ್ ಹೇಳಿದ್ದಾರೆ.ಬೆಂಗಳೂರು ವಿಶ್ವವಿದ್ಯಾಲಯದ 59ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿಶ್ವವಿದ್ಯಾಲಯ ಧನಸಹಾಯ ಆಯೋಗ, ಸಾರ್ವಜನಿಕ ವಿಶ್ವವಿದ್ಯಾಲಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು. ವಿಶ್ವವಿದ್ಯಾಲಯದಲ್ಲಿ ಎಎಡಿಪಿ ಯೋಜನೆಯಡಿ, ಹೊಸದಾಗಿ ಹಲವು ಕೋರ್ಸ್‌ಗಳನ್ನು ಆರಂಭಿಸಲಾಗಿದೆ. ಈ ವಿದ್ಯಾರ್ಥಿಗಳಿಗೆ ಪದವಿ ಶಿಕ್ಷಣದ 3ನೇ ವರ್ಷ ದೇಶದ ಪ್ರತಿಷ್ಠಿತ ಕಾರ್ಪೋರೇಟ್ ಸಂಸ್ಥೆಗಳಲ್ಲಿ ಕೆಲಸ ಮಾಡುವ ಮೂಲಕ ಉದ್ಯಮ ಮತ್ತು ಉದ್ಯೋಗ ಗಳಿಸಲು ಅಗತ್ಯವಾದ ತರಬೇತಿ ನೀಡಲಾಗುವುದು ಎಂದರು.

*******

**'ಬೆಳವಣಿಗೆಯ ಹೊಸ ಪರಿಕಲ್ಪನೆ'** ಧ್ಯೇಯದೊಂದಿಗೆ ಬೆಂಗಳೂರಿನಲ್ಲಿ ಫೆಬ್ರುವರಿ 12 ರಿಂದ 14 ರವರೆಗೆ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಭಾಗವಹಿಸುವುದಕ್ಕೆ ಉದ್ಯಮಿಗಳನ್ನು ಆಹ್ವಾನಿಸಲು ರಾಜ್ಯ ಸರ್ಕಾರ ನಿನ್ನೆ ದೆಹಲಿಯಲ್ಲಿ ಯಶಸ್ವಿಯಾಗಿ ರೋಡ್ ಶೋ ನಡೆಸಿತು. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವ ಎಂ.ಬಿ ಪಾಟೀಲ್ ರೋಡ್ ಷೋ ಉದ್ಘಾಟಿಸಿ, ಮಾತನಾಡಿ, ತಂತ್ರಜ್ಞಾನ ಆಧಾರಿತ, ಪರಿಸರ ಸ್ನೇಹಿ, ಸುಸ್ಥಿರ ಹಾಗೂ ಸಮತೋಲನದ ಬೆಳವಣಿಗೆಯನ್ನು ಉತ್ತೇಜಿಸುವ ರಾಜ್ಯ ಸರ್ಕಾರದ ಬದ್ಧತೆಯನ್ನು ಈ ಧ್ಯೇಯವು ಸಮರ್ಥವಾಗಿ ಪ್ರತಿಬಿಂಬಿಸುತ್ತದೆ ಎಂದರು. ಈ ಸಮಾವೇಶದಲ್ಲಿ 100 ಕ್ಕೂ ಹೆಚ್ಚು ಪರಿಣತರು ವಿಷಯ ಮಂಡಿಸಲಿದ್ದಾರೆ. 30ಕ್ಕೂ ಹೆಚ್ಚು ತಾಂತ್ರಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. 5 ಸಾವಿರಕ್ಕೂ ಅಧಿಕ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

*******

**ಜನ ಸಂಪರ್ಕ ಸಭೆಯಲ್ಲಿ** ಸಲ್ಲಿಕೆಯಾದ ಅರ್ಜಿಗಳನ್ನು ಅಧಿಕಾರಿಗಳು ತ್ವರಿತಗತಿಯಲ್ಲಿ ಇತ್ಯರ್ಥಪಡಿಸಬೇಕು ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋ ʼ ಎಸ್. ಲಾಡ್ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ನಿನ್ನೆ ನಡೆದ ಜಿಲ್ಲಾ ಮಟ್ಟದ ಜನಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು, 200 ಕೋಟಿ ರೂಪಾಯಿ ಅನುದಾನದಲ್ಲಿ ವಿವಿಧ ವಾರ್ಡಗಳನ್ನು ಅಭಿವೃದ್ಧಿ ಪಡಿಸಲಾಗುವುದು. ಕುಡಿಯುವ ನೀರಿನ ಸಮಸ್ಯೆಗಳಿಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಪರಿಹರಿಸುವಂತೆ ತಿಳಿಸಲಾಗಿದೆ ಎಂದು ಹೇಳಿದರು.

*******

**ರಾಮನಗರ ಜಿಲ್ಲೆಯ ರೇಷ್ಮೆ** ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳನ್ನು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ಶೀಘ್ರವಾಗಿ ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಿ ಕೊಡುವುದಾಗಿ ಪಶುಸಂಗೋಪನೆ ಹಾಗೂ ರೇಷ್ಮೆ ಖಾತೆ ಸಚಿವ ಕೆ. ವೆಂಕಟೇಶ್ ಭರವಸೆ ನೀಡಿದ್ದಾರೆ. ರಾಮನಗರ ರೇಷ್ಮೆ ಗೂಡಿನ ಮಾರುಕಟ್ಟೆಗೆ ನಿನ್ನೆ ಭೇಟಿ ನೀಡಿ, ನಂತರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರೇಷ್ಮೆ ಬೆಳೆ ಕುರಿತು ನಡೆದ ಚರ್ಚೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರವು ರೇಷ್ಮೆ ಬೆಳೆಗಾರರಿಗೆ ಒದಗಿಸಿರುವ ಸವಲತ್ತುಗಳನ್ನು ನಿಗದಿತ

ಅವಧಿಯೊಳಗೆ ತಲುಪಿಸುವುದು ಇಲಾಖೆಯ ಕರ್ತವ್ಯವಾಗಿದೆ ಎಂದು ಹೇಳಿದರು. ರಾಜ್ಯ ಸರ್ಕಾರ ಜಾರಿಗೆ ತಂದ ಹಲವಾರು ಯೋಜನೆಗಳನ್ನು ಅಧಿಕಾರಿಗಳು ರೇಷ್ಮೆ ಬೆಳೆಗಾರರಿಗೆ ತಲುಪಿಸಬೇಕು. ಜಿಲ್ಲೆಯಲ್ಲಿ ನೂತನ ರೇಷ್ಮೆ ಮಾರುಕಟ್ಟೆಯನ್ನು ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ವ್ಯವಸ್ಥಿತವಾಗಿ ನಿರ್ಮಿಸಲಾಗುತ್ತಿದೆ. ಅಲ್ಲದೇ ವಿವಿಧ ಜಿಲ್ಲೆಗಳಲ್ಲಿ, ಇಲಾಖೆಗೆ ಸೇರಿದ ಸಾಕಷ್ಟು ಜಮೀನು ಲಭ್ಯವಿದ್ದು, ಅಲ್ಲಿಯೂ ಬೆಳೆಗಾರರ ಹಿತರಕ್ಷಣೆ ದೃಷ್ಟಿಯಿಂದ ವಿವಿಧ ರೀತಿಯ ಚಟುವಟಿಕೆಗಳನ್ನು ಮಾಡಲಾಗುವುದು ಎಂದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

*******

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 29,** ಭಾನುವಾರದಂದು ಬೆಳಗ್ಗೆ 11 ಗಂಟೆಗೆ ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದ ಮೂಲಕ ದೇಶದ ಜನತೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮನ್ ಕಿ ಬಾತ್ ಕಾರ್ಯಕ್ರಮದ 114 ನೇ ಆವೃತ್ತಿ ಇದಾಗಿದ್ದು, ಮೈ ಜಿ.ಒ.ವಿ ಓಪನ್ ಫೋರಮ್, ನಮೋ ಆ್ಯಪ್ ಮೂಲಕ ಸಾರ್ವಜನಿಕರು ತಮ್ಮ ಅನಿಸಿಕೆ, ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು. ಅಲ್ಲದೇ, 1800–11–7800 ಉಚಿತ ದೂರವಾಣಿ ಸಂಖ್ಯೆಗೆ ಕರೆ ಮಾಡಿಯೂ ಸಂದೇಶಗಳನ್ನು ದಾಖಲಿಸಬಹುದಾಗಿದೆ.

*******

**ಕೇಂದ್ರದ ಕೌಶಲಾಭಿವೃದ್ಧಿ** ಮತ್ತು ಉದ್ಯಮಶೀಲತೆ ಇಲಾಖೆ, 'ನಲ್ ಜಲ್ ಮಿತ್ರ' ಯೋಜನೆ ಜಾರಿಗೊಳಿಸಿದೆ. ಬಹು ಕೌಶಲ ತರಬೇತಿ ಯೋಜನೆ ಅಡಿ ಕೊಳಾಯಿ, ವಿದ್ಯುತ್ ಕೆಲಸ, ಕಲ್ಲುಮಣ್ಣು ಕೆಲಸ, ಉಪಕರಣ ಮತ್ತು ಯಂತ್ರೋಪಕರಣ ದುರಸ್ತಿ ಕೆಲಸಗಳ ಸ್ವಯಂ ಉದ್ಯೋಗ ತರಬೇತಿ ನೀಡಲಾಗುತ್ತಿದೆ. ಬೆಳಗಾವಿಯ ಕೌಶಲಾಭಿವೃದ್ಧಿ ತರಬೇತಿ ಕೇಂದ್ರದಲ್ಲಿ, ಬೆಳಗಾವಿ, ಖಾನಾಪುರ ಮತ್ತು ಬೈಲಹೊಂಗಲ ತಾಲೂಕಿನ, ಆಯ್ದ 50 ಜನ ಮಹಿಳೆಯರಿಗೆ ಕೊಳಾಯಿ ಅಂದರೆ ಪ್ಲಂಬಿಂಗ್ ತರಬೇತಿ ನೀಡಲಾಯಿತು. ಒಟ್ಟು ಹದಿನೇಳು ದಿನಗಳ ತರಬೇತಿಯ ಮೊದಲನೇ ಹಂತ, ಅಗಸ್ಟ 19 ರಿಂದ ಆರಂಭಗೊಂಡಿದ್ದು ನಿನ್ನೆ ಕೊನೆಗೊಂಡಿದೆ. **ಬೈಲಹೊಂಗಲ ತಾಲೂಕಿನ ಮರಡಿನಾಗಲಾಪುರದ** ಫಲಾನುಭವಿ ಕಮಲಾಕ್ಷಿ ಮಾತನಾಡಿ, ಪ್ಲಂಬಿಂಗ್ ಕೆಲಸ ಕೇವಲ ಪುರು 'ರಿಗೆ ಮಾತ್ರ ಸೀಮಿತವಾಗಿತ್ತು. ಈಗ ಮಹಿಳೆಯರೂ ನಿರ್ವಹಿಸಬಲ್ಲರು ಎಂಬುದು ತರಬೇತಿ ಮೂಲಕ ಕಂಡುಕೊಂಡಿದ್ದಾಗಿ ಎಂದರು.

**ಧ್ವನಿ : ಕಮಲಾಕ್ಷಿ (41 ಸೆಕೆಂಡುಗಳು)**

*******

**ಉತ್ತಮ ಹವ್ಯಾಸಗಳನ್ನು ರೂಪಿಸಿಕೊಳ್ಳಲು** ಮಕ್ಕಳಿಗೆ ಉತ್ತಮ ಮಾರ್ಗದರ್ಶನ ನೀಡಬೇಕು. ಕುಟುಂಬದಲ್ಲಿ ಒಳ್ಳೆಯ ವಾತಾವರಣ ಇರುವಂತೆ ನೋಡಿಕೊಳ್ಳಬೇಕು. ಕೌಟಂಬಿಕ ಸಮಸ್ಯೆ, ಆರೋಗ್ಯ ಸಮಸ್ಯೆ, ಸೋಲು, ಹತಾಶೆ, ಹಣಕಾಸಿನ ಸಮಸ್ಯೆಗಳು ಆತ್ಮಹತ್ಯೆಗೆ ಕಾರಣಗಳಾಗಿವೆ ಎಂದು ಖ್ಯಾತ ಮನೋವೈದ್ಯ ಸಿ.ಆರ್.ಚಂದ್ರಶೇಖರ ಹೇಳಿದ್ದಾರೆ. ಧಾರವಾಡದ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನಗಳ ಸಂಸ್ಥೆ, ಡಿಮ್ಹಾನ್ಸ್ ಸಭಾಂಗಣದಲ್ಲಿ, ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನದ ಅಂಗವಾಗಿ ನಿನ್ನೆ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆತ್ಮಹತ್ಯೆ ತಡೆಗಟ್ಟಬಹುದಾದ ವಿ 'ಯ. ಸರಿಯಾದ ಕಾರಣಗಳನ್ನು ತಿಳಿದುಕೊಂಡು, ಆತ್ಮಹತ್ಯೆ ಮಾಡಿಕೊಳ್ಳಲು ಮನಸ್ಸು ಮಾಡಿರುವ ವ್ಯಕ್ತಿಗಳಿಗೆ ಅಗತ್ಯ ಆಪ್ತ ಸಮಾಲೋಚನೆ, ಸಹಾಯ ಮಾಡಬೇಕು ಎಂದರು.

ಧ್ವನಿ – ಡಾಕ್ಟರ್ ಸಿ.ಆರ್ ಚಂದ್ರಶೇಖರ್ (34 ಸೆಕೆಂದುಗಳು)

*******

## ಈಗ ಸಂಕ್ಷಿಪ್ತ ಸುದ್ದಿಗಳು

**ಫಲಾನುಭಿಗಳನ್ನು ಅನಗತ್ಯವಾಗಿ ಅಲೆದಾಡಿಸದೆ,** ಪ್ರಾಥಮಿಕ ಹಂತದಲ್ಲೇ ದಾಖಲೆಗಳನ್ನು ಪರಿಶೀಲಿಸುವ ಮೂಲಕ ಸಾಲ ಸೌಲಭ್ಯ ಕಲ್ಪಿಸಲು ಮುಂದಾಗಬೇಕು ಎಂದು ಸಂಸದ ಪಿ.ಸಿ.ಗದ್ದಿಗೌಡರ ಬಾಗಲಕೋಟೆಯಲ್ಲಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******

**ಹಾವೇರಿ ಜಿಲ್ಲೆಯ ಏಳು ಕಡೆಗಳಲ್ಲಿ ಬೆಂ**ಬಲ ಬೆಲೆ ಯೋಜನೆಯಡಿ ಸೋಯಾಬೀನ್ ಉತ್ಪನ್ನವನ್ನು ಖರೀದಿ ಕೇಂದ್ರಗಳನ್ನು ಸ್ಥಾಪಿಸುವಂತೆ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಶಾಖಾ ವ್ಯವಸ್ಥಾಪಕರಿಗೆ, ಜಿಲ್ಲಾಧಿಕಾರಿ ವಿಜಯ ಮಹಾತೇಶ ದಾನಮ್ಮನವರ ಸೂಚಿಸಿದ್ದಾರೆ.

*******

**ವಿಶ್ವ ಹಿರಿಯ ನಾಗರಿಕರ ದಿನಾಚರಣೆ** ಅಂಗವಾಗಿ ಬಳ್ಳಾರಿಯಲ್ಲಿ ನಿನ್ನೆ ಜಿಲ್ಲೆಯ ಹಿರಿಯ ನಾಗರಿಕರಿಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆ ಹಮ್ಮಿಕೊಳ್ಳಲಾಗಿತ್ತು.

*******